ನರಗುಂದ ಮತ ಕ್ಷೇತ್ರದ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿಮಾಡುವ ಬಗ್ಗೆ

2638 (3346) ಶ್ರೀ ಯಾವಗಲ್ ಬಿ.ಆರ್. (ನರಗುಂದ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ನರಗುಂದ ಮತಕ್ಷೇತ್ರದಲ್ಲಿ ಇರುವ ಸರ್ಕಾರಿ ಆಸ್ಪತ್ರೆಗಳ ಸಂಖ್ಯೆ ಎಷ್ಟು; ಹಾಗೂ ಇವುಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು;

ಆ) ಇವುಗಳನ್ನು ಯಾವಾಗ ತುಂಬಲಾಗುವುದು;

ಇ) ಹೊಳೆ ಆಲೂರು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಯಾವಾಗ ಕಟ್ಟಡ ಒದಗಿಸಲಾಗುವುದು ಹಾಗೂ ಯಾವಾಗ ಮೇಲ್ದರ್ಜೆಗೆ ಏರಿಸಲಾಗುವುದು?

ಶ್ರೀ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ನರಗುಂದ ಮತಕ್ಷೇತ್ರದಲ್ಲಿ ಇರುವ ಸರ್ಕಾರಿ ಆಸ್ಪತ್ರೆಗಳ ವಿವರ

ಪ್ರಾ.ಆ. ಕೇಂದ್ರಗಳು	4
ಪ್ರಾ.ಆ. ಘಟಕ	1
ಸಮುದಾಯ ಆರೋಗ್ಯ ಕೇಂದ್ರ	1
ಒಟ್ಟು	6

ಇವುಗಳಲ್ಲಿ ಖಾಲಿ ಇರುವ ವೈದ್ಯರು ಮತ್ತು ಇತರೆ ಸಿಬ್ಬಂದಿಗಳ ಹುದ್ದೆಗಳ ವಿವರ :

ವೈದ್ಯರು	2
ಇತರೇ ಸಿಬ್ಬಂದಿ	39

ಆ) ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಪ್ರಯೋಗಶಾಲಾ ತಂತ್ರಜ್ಞ, ಮತ್ತು ವಾಹನ ಚಾಲಕರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿ ತುಂಬಲು ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಲಾಗಿದೆ. ಇತರೆ ಸಿಬ್ಬಂದಿಗಳ ಹುದ್ದೆಗಳ ಪೈಕಿ ಆ. ಸಹಾಯಕರ ಮತ್ತು ಅರೆ ವೈದ್ಯಕೀಯ ಸಿಬ್ಬಂದಿ ಹುದ್ದೆಗಳನ್ನು ನೇರ ನೇಮಕಾತಿಯಿಂದ ತುಂಬಲು ವಿಶೇಷ ನೇಮಕಾತಿ ನಿಯಮಗಳನ್ನು ರೂಪಿಸುವ ಪ್ರಸ್ತಾವನೆ ಸರಕಾರದ ಪರಿಶೀಲನೆಯಲ್ಲಿದೆ.

ಇ) ಪ್ರಸ್ತುತ ಈ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ.

ಮಂಗಳೂರಿನಲ್ಲಿ ಸರ್ಕಾರಿ ಪದವಿಪೂರ್ವ ವಿಜ್ಞಾನ, ವಾಣಿಜ್ಯ ಹಾಗೂ ಕಲಾ ತರಗತಿಗಳನ್ನು ಪ್ರಾರಂಭಿಸುವುದು

2639 (3138) ಶ್ರೀ ಯೋಗೀಶ್ ಭಟ್ ಎನ್. (ಮಂಗಳೂರು) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಮಂಗಳೂರಿನಲ್ಲಿರುವ ಯೂನಿವರ್ಸಿಟಿ ಕಾಲೇಜಿನಲ್ಲಿ ಬಡ ಹಾಗೂ ಮಧ್ಯಮ ವರ್ಗದ ವಿದ್ಯಾರ್ಥಿಗಳಿಗೆ ಪಿಯುಸಿಯಲ್ಲಿ ಅಧ್ಯಯನ ಮಾಡಲು ಪದವಿ ಪೂರ್ವ ಶಿಕ್ಷಣ ವ್ಯವಸ್ಥೆ ಆರಂಭಿಸುವ ಬಗ್ಗೆ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ಇರುವ ತೊಂದರೆಗಳೇನು? ಹಾಗೂ ಎಂದಿನಿಂದ ಆರಂಭಿಸಲಾಗುವುದು?

ಆ) ಸರ್ಕಾರಿ ಪದವಿ ಪೂರ್ವ ವಿಜ್ಞಾನ, ವಾಣಿಜ್ಯ ಹಾಗೂ ಕಲಾ ತರಗತಿಗಳನ್ನು ಮಂಗಳೂರಿನಲ್ಲಿ ಆರಂಭಿಸುವ ತುರ್ತು ಅವಶ್ಯಕತೆಯಿದ್ದು ಈ ಬಗ್ಗೆ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳುವುದೇ?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಮಂಗಳೂರು ನಗರದಲ್ಲಿ ಹಾಗೂ ಆಸುಪಾಸಿನಲ್ಲಿ ಸಾಕಷ್ಟು ಪದವಿಪೂರ್ವ ಕಾಲೇಜುಗಳಿರುವುದರಿಂದ ವಿಶ್ವವಿದ್ಯಾಲಯ ಕಾಲೇಜಿನಲ್ಲಿ ಪಿಯುಸಿ ತರಗತಿಗಳನ್ನು ತೆರೆಯುವ ಅವಶ್ಯಕತೆ ಇರುವುದಿಲ್ಲ.

ಆ) ಮಂಗಳೂರು ನಗರದಲ್ಲಿ 02 ಸರ್ಕಾರಿ ಪಿಯುಸಿ ಕಾಲೇಜುಗಳು ಮತ್ತು 22 ಖಾಸಗಿ ಕಾಲೇಜುಗಳಿರುತ್ತವೆ. ಈ ಕಾಲೇಜುಗಳಲ್ಲಿ ಪ್ರಥಮ ಪಿಯುಸಿಗೆ ವಿದ್ಯಾರ್ಥಿಗಳ ದಾಖಲಾತಿ ನಡೆದಿರುತ್ತದೆ. ಹೆಚ್ಚಿನ ಬೇಡಿಕೆ ಬಂದಲ್ಲಿ ಹೆಚ್ಚು ವಿದ್ಯಾರ್ಥಿಗಳನ್ನು ದಾಖಲು ಮಾಡಿಕೊಳ್ಳಲು ಅನುಮತಿ ನೀಡಲಾಗುವುದು.

ಅಧ್ಯಕ್ಷರು :— ಮಂಡಿಸಲಾಯಿತು